ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ.,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86.

# ದಿನಾಂಕ:-03-07-2021ರಂದು ನಡೆದ ವಾರ್ಡ್ ಸಂಖ್ಯೆ:67ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ :ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್./23/2021-22 ದಿನಾಂಕ:30-06-2021

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ವಿಶ್ವನಾಥ್ | ಮುಖ್ಯ ಅಭಿಯಂತರರು (ಘ.ತ್ಯಾ.ನಿ) ಬಿಬಿಎಂಪಿ ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67 |
| 2. | ಶ್ರೀ ಉದಯ ಶಂಕರ್ | 1ನೇ ಆರ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ |
| 3. | ಶ್ರೀ ರಾಮಚಂದ್ರ | 1ನೇ ಎನ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃದ್ಧಿಸಂಘ |
| 4. | ಶ್ರೀ. ಚಂದ್ರಪ್ಪ | ಸಹಾಯಕ ಪೋಲಿಸ್ ಸಬ್ ಇನ್ಸ್ ಪೆಕ್ಟರ್ ಮಹಾಲಕ್ಷ್ಮೀಲೇಔಟ್ ಪೊಲೀಸ್ ಠಾಣೆ |
| 5. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-67 |
| 6. | ಶ್ರೀ ಗೋಪಾಲ್ ಕೃಷ್ಣ | ಸಂಚಾರಿ ಪೋಲಿಸ್ ಕಾನ್ಸಟೆಬಲ್, ರಾಜಾಜಿನಗರ ಪೊಲೀಸ್ ಠಾಣೆ |
| 7. | ಶ್ರೀ. ರಾಜೇಶ್ | ವಾರ್ಡ್ ಮಾರ್ಷಲ್ -67 |
| 8. | ಶ್ರೀ. ಗಂಗಚೆಲುವಯ್ಯ | ಬೆಂ.ಜ.ಮಂ |
| 9. | ಶ್ರೀ. ಮಂಜು | ಸಹಾಯಕ ಪೋಲಿಸ್ ಸಬ್ ಇನ್ಸ್ ಪೆಕ್ಟರ್ ರಾಜಾಜಿನಗರ ಪೊಲೀಸ್ ಠಾಣೆ. |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಜುಲೈ ಮಾಹೆಯ ಮೊದಲನೇ ಶನಿವಾರ ದಿ:03/07/2021ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಸಭೆಗೆ ಮಂಡಿಸಿದರು.

(signature) 3/7/2021

ಪು.ತಿ.ನೋ.



Scanned by CamScanner

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅಹವಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## <u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:</u>

| | |
|---|---|
| ಶ್ರೀ ರಾಮಚಂದ್ರ<br>1ನೇ ಎನ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃದ್ಧಿಸಂಘ | ವಾರ್ಡ್‌ನ ರಾಜಾಜಿನಗರ 1ನೇ 'ಎನ್' ಬ್ಲಾಕ್‌ನಲ್ಲಿ ಒಣಗಿರುವ ಮರಗಳನ್ನು ತೆರವುಗೊಳಿಸಬೇಕು ಹಾಗು ರಸ್ತೆಗೆ ಬಾಗಿರುವ ಮರಗಳ ಕೊಂಬೆ ಹಾಗು ಬೆಸ್ಕಾಂ ವಿದ್ಯುತ್ ಲೈನ್‌ಗಳಿಗೆ ಅಡ್ಡಲಾಗಿರುವ ಕೊಂಬೆಗಳನ್ನು ಕಟಾವು ಮಾಡಬೇಕು ಇಲ್ಲದಿದ್ದರೆ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತದೆ, ಇದರ ಕುರಿತು ಮನವಿ ಪತ್ರವನ್ನು ಸಹ ನೋಡಲ್ ಅಧಿಕಾರಿಗಳಿಗೆ ಸಲ್ಲಿಸಿದ್ದೇನೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಾಜಾಜಿನಗರ 1ನೇ 'ಎನ್' ಬ್ಲಾಕ್‌ನ ಮರಗಳ ದೂರಿನ ಕುರಿತು ಮನವಿ ಪತ್ರವನ್ನು ಸಲ್ಲಿಸಿರುತ್ತಾರೆ. ಇದರ ಕುರಿತು ಪತ್ರವನ್ನು ಅರಣ್ಯ ಇಲಾಖೆಗೆ ಸಲ್ಲಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ ರಾಮಚಂದ್ರ<br>1ನೇ ಎನ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃದ್ಧಿಸಂಘ | ವಾರ್ಡ್‌ನ ರಾಜಾಜಿನಗರ 1ನೇ 'ಎನ್' ಬ್ಲಾಕ್‌ನಲ್ಲಿ ಹಲವು ಸಿಸಿ ಕ್ಯಾಮೇರಾಗಳು ಕಾರ್ಯನಿರ್ವಹಿಸುತ್ತಿಲ್ಲ ಹಾಗು ಹಲವು ಕಡೆ ಸಿಸಿ ಕ್ಯಾಮೇರಾಗಳು ಇರುವುದಿಲ್ಲಾ ಇದರ ಕುರಿತು ಸಹ ಮನವಿ ಪತ್ರವನ್ನು ಸಹ ನೋಡಲ್ ಅಧಿಕಾರಿಗಳಿಗೆ ಸಲ್ಲಿಸಿದ್ದೇನೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಾಜಾಜಿನಗರ 1ನೇ 'ಎನ್' ಬ್ಲಾಕ್‌ನ ಸಿಸಿ ಕ್ಯಾಮೇರಾಗಳ ದೂರಿನ ಕೂರಿತು ಸಹಾಯಕ ಅಭಿಯಂತರರಿಗೆ ಕ್ರಮವಹಿಸಲು ಸೂಚಿಸುತ್ತೆನೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ ರಾಮಚಂದ್ರ<br>1ನೇ ಎನ್ ಬ್ಲಾಕ್ ನಿವಾಸಿಗಳ ಕ್ಷೇಮಾಭಿವೃದ್ಧಿಸಂಘ | ವಾರ್ಡ್‌ನ ರಾಜಾಜಿನಗರ 1ನೇ 'ಎನ್' ಬ್ಲಾಕ್‌ನ ಟ್ರಯಾಂಗಲ್ ಉದ್ಯಾನದಲ್ಲಿ ಡೆಬ್ರೀಸ್ ತೆರವುಗೊಳಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಾಜಾಜಿನಗರ 1ನೇ 'ಎನ್' ಬ್ಲಾಕ್‌ನ ಡೆಬ್ರೀಸ್ ದೂರಿನ ಕೂರಿತು ಸಹಾಯಕ ಅಭಿಯಂತರರಿಗೆ ಕ್ರಮವಹಿಸಲು ಸೂಚಿಸುತ್ತೆನೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ ಗೋಪಾಲ್ ಕೃಷ್ಣ<br>ಸಂಚಾರಿ ಪೋಲಿಸ್ ಕಾನ್ಸಟೆಬಲ್, ರಾಜಾಜಿನಗರ ಪೊಲೀಸ್ ಠಾಣೆ | ಮಹಾಲಕ್ಷ್ಮೀಪುರಂ ಸಿಗ್ನಲ್ ಹತ್ತಿರ ಡೆಬ್ರೀಸ್ ತೆರವುಗೊಳಿಸಬೇಕು ಹಾಗು ಮರದ ಕೊಂಬೆ ತೆರವುಗೊಳಿಸಬೇಕು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಮಹಾಲಕ್ಷ್ಮೀಪುರಂ ಸಿಗ್ನಲ್ ಹತ್ತಿರ ಡೆಬ್ರೀಸ್ ದೂರಿನ ಕೂರಿತು ಸಹಾಯಕ ಅಭಿಯಂತರರಿಗೆ ಕ್ರಮವಹಿಸಲು ಸೂಚಿಸುತ್ತೆನೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಮಂಜು<br>ಸಹಾಯಕ ಪೋಲಿಸ್ ಸಬ್ ಇನ್ಸ್ ಪೆಕ್ಟರ್<br>ರಾಜಾಜಿನಗರ ಪೊಲೀಸ್ ಠಾಣೆ. | ವಾರ್ಡ್‌ನಲ್ಲಿ ಕಟ್ಟಡ ನಿರ್ಮಾಣ ಮಾಡುತ್ತಿರುವ ಮಾಲೀಕರು ಹಾಗು ರಸ್ತೆ ಕಾಮಗಾರಿ ಮಾಡುವ ಗುತ್ತಿಗೆದಾರರು ಕಟ್ಟಡ ನಿರ್ಮಾಣದ ಅಗತ್ಯ ವಸ್ತುಗಳನ್ನು ರಸ್ತೆಯ ಬದಿಯಲ್ಲಿ ಹಾಕಿರುತ್ತಾರೆ ಇದರಿಂದ ವಾಹನ ಸವಾರರಿಗೆ ಬಹಳ ತೊಂದರೆ ಉಂಟಾಗುತ್ತದೆ ಹಾಗು ರಸ್ತೆ ಅಪಘಾತ ಹಾಗುವ ಸಂಭವವಿರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರು ದೂರಿನ ವಿರುದ್ಧ ಕ್ರಮವಹಿಸಲು ತಿಳಿಸಿದರು. |



ಪು.ತಿ.ನೋ.

ಡಿ.ಪ್ರ 3/7/2021

Scanned by CamScanner

| | |
|---|---|
| ಶ್ರೀ ಗೋಪಾಲ್ ಕೃಷ್ಣ ಸಂಚಾರಿ ಪೋಲಿಸ್ ಕಾನ್ಸಟೇಬಲ್, ರಾಜಾಜಿನಗರ ಪೊಲೀಸ್ ಠಾಣೆ | ವಾರ್ಡ್‌ನ ಚೈತನ್ಯ ಶಾಲೆ ಹತ್ತಿರ ರಸ್ತೆಯಲ್ಲಿ ಗುಂಡಿ ಆಗಿರುತ್ತದೆ ವಾಹನ ಸವಾರರಿಗೆ ತೊಂದರೆ ಉಂಟಾಗಿರುತ್ತದೆ |
| ಶ್ರೀ ಗೋಪಾಲ್ ಕೃಷ್ಣ ಸಂಚಾರಿ ಪೋಲಿಸ್ ಕಾನ್ಸಟೇಬಲ್, ರಾಜಾಜಿನಗರ ಪೊಲೀಸ್ ಠಾಣೆ | ವಾರ್ಡ್‌ನ ಮಹಾಲಕ್ಷ್ಮೀಪುರಂ ಸಿಗ್ನಲ್ ಹತ್ತಿರ ಮಾಡಲ್ ರಸ್ತೆಗೆ ಪೈಂಟಿಂಗ್ ಮಾಡಬೇಕು ಎಂದು ಸಭೆಯಲ್ಲಿ ತಿಳಿಸಿದರು. |

ಪ್ರತಿಯನ್ನು

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

(signature)
ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(signature) 3/7/2021
ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್– 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner